# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ.. ಕನ್ನಡ ವಾರಪತ್ರಿಕೆ

**ಸುಭಾಷಿತ:**
ಬದುಕಿನಲ್ಲಿ ಏನೇ ನಡೆದರೂ, ಏನೇ
ಸಂಭವಿಸಿದರೂ ಒಳ್ಳೆಯದೇ ಆಗಲಿದೆ.
ವರ್ತಮಾನದಲ್ಲಿ ಏನಾಗುತ್ತಿದೆಯೋ
ಅದೆಲ್ಲವೂ ಉತ್ತಮವಾಗಿಯೇ ನಡೆಯುತ್ತಿದೆ..
ಮುಂದೆ ಏನಾಗಲಿದೆಯೋ ಅದು ಕೂಡ
ಚೆನ್ನಾಗಿಯೇ ನಡೆಯಲಿದೆ..
ಭವಿಷ್ಯದ ಬಗ್ಗೆ ಎಂದಿಗೂ ಚಿಂತಿಸಬೇಡಿ
ವರ್ತಮಾನದಲ್ಲಿಯೇ ಜೀವಿಸಿ..
**ಭಗವಾನ್ ಶ್ರೀಕೃಷ್ಣ**



REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 01-08-2025 to 07-08-2025 ಬೆಲೆ: 7-00 ಸಂಪುಟ–5 ಸಂಚಿಕೆ–06 ಪುಟಗಳು–6

ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ
www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು






ಇತ್ತೀಚಿನ ದಿನಗಳಲ್ಲಿ ಆಟಿಡೊಂಜಿ ದಿನ, ಕೆಸರ್‌ಡೊಂಜಿ ದಿನದಂತಹ ಕಾರ್ಯಕ್ರಮಗಳು ತುಳುನಾಡಿನಾದ್ಯಂತ ನಡೆಯುತ್ತಿದ್ದು, ಇಂತಹ ಕಾರ್ಯಕ್ರಮಗಳಲ್ಲಿ ಮಕ್ಕಳು ವೃದ್ಧರೆನ್ನದೆ ಎಲ್ಲರೂ ಕೆಸರಿನಲ್ಲಿ ಎದ್ದು ಬಿದ್ದು ಖುಷಿ ಪಡುವುದನ್ನು ನೋಡಬಹುದು. ಒಂದು ರೀತಿಯಲ್ಲಿ ಇಂತಹ ಕಾರ್ಯಕ್ರಮಗಳು ಇಂದಿನ ಪೀಳಿಗೆಗೆ ನಮ್ಮ ನಾಡಿನ ಆಚರಣೆಗಳನ್ನು ತೋರಿಸುತ್ತಿದ್ದರೆ. ಹಿರಿಯರಿಗೆ ನಮ್ಮ ಆಚರಣೆಗಳ ನೆನಪು ಹುಟ್ಟಿಸುತ್ತಿದೆ ಎಂದರೆ ತಪ್ಪಾಗಲಾರದು. ಇನ್ನೊಂದೆಡೆ ಆಧುನಿಕತೆಯ ಸೆಳೆತದಲ್ಲಿ ಗದ್ದೆ ಹೊಲಗಳು ಮಾಯವಾಗುತ್ತಿರುವುದು ಮುಂದೊಂದು ದಿನ ನೈಸರ್ಗಿಕವಲ್ಲದ ಆಹಾರದ ಮೂಲಕ ಬದುಕಬೇಕಾಗುವುದೋ ಎನ್ನುವ ಭಯ ಮೂಡಿಸುತ್ತಿದೆ.

## ಬಿಜೆಪಿಯ ಮತಗಳ್ಳತನ ಜನರಿಗೆ ತಿಳಿಯಬೇಕು: ಡಿಸಿಎಂ



**ಬೆಂಗಳೂರು:** ಬಿಜೆಪಿ ಮತಗಳ್ಳತನ ನಡೆಸಿದೆ ಎಂಬುದು ಜನರಿಗೆ ತಿಳಿಯಬೇಕು ಎಂಬುದು ನಮ್ಮ ಉದ್ದೇಶ. ಬಿಜೆಪಿ ಮತಗಳ್ಳತನದ ಬಗ್ಗೆ ಪ್ರತಿಭಟನಾ ಸಭೆ ಅಥವಾ ರ‍್ಯಾಲಿ ಮಾಡಬೇಕೇ ಎನ್ನುವುದನ್ನು ಪಕ್ಷದ ಪ್ರಧಾನ ಕಾರ್ಯದರ್ಶಿಗಳ ಸಭೆಯಲ್ಲಿ ತೀರ್ಮಾನಿಸಲಾಗುವುದು ಎಂದು ಡಿಸಿಎಂ ಡಿ.ಕೆ.ಶಿವಕುಮಾರ್ ಹೇಳಿದ್ದಾರೆ. ನಗರದಲ್ಲಿಂದು ನಡೆದ ಕ್ವಾಂಟಮ್ ಶೃಂಗಸಭೆಯ ನಂತರ ಅವರು ರಾಹುಲ್ ಗಾಂಧಿಯವರ ಕಾರ್ಯಕ್ರಮದ ಬಗ್ಗೆ ಮಾಧ್ಯಮಗಳ ಪ್ರಶ್ನೆಗಳಿಗೆ ಉತ್ತರಿಸಿದ ಅವರು ಚುನಾವಣಾ **3ನೇ ಪುಟಕ್ಕೆ**

## ರೈತರಿಗೆ ಕಣ್ಣೀರು ಹಾಕಿಸಿದ ಸರಕಾರಕ್ಕೆ ಒಳ್ಳೆಯದಾಗಲ್ಲ –ಬಿ.ವೈ.ವಿ



**ತುಮಕೂರು:** ಕೇಂದ್ರ ಸರಕಾರ ರಾಜ್ಯಕ್ಕೆ ನೀಡಿರುವ ರಸಗೊಬ್ಬರ ರೈತರಿಗೆ ಹಂಚಿಕೆ ಮಾಡದೆ ದಳ್ಳಾಳಿಗಳ ಮೂಲಕ ಕಾಳಸಂತೆಯಲ್ಲಿ ಮಾರಾಟ ಮಾಡಲಾಗಿದೆ. ಗೊಬ್ಬರಕ್ಕಾಗಿ ದಿನ ಬೆಳಗ್ಗೆ ಸಾಲುಗಟ್ಟಿ ನಿಲ್ಲುವಂತಹ ಪರಿಸ್ಥಿತಿ ನಿರ್ಮಾಣ ಮಾಡಿರುವ ರಾಜ್ಯ ಕಾಂಗ್ರೆಸ್ ಸರಕಾರ ರೈತರನ್ನು ಬೀದಿಪಾಲು ಮಾಡಿದೆ. ರೈತರ ಕಣ್ಣಲ್ಲಿ ನೀರು ತರಿಸುವ ಯಾವುದೇ ಸರಕಾರಕ್ಕೆ ಒಳ್ಳೆಯದಾಗುವುದಿಲ್ಲ ಎಂದು ರಾಜ್ಯ ಬಿಜೆಪಿ ಅಧ್ಯಕ್ಷ **3ನೇ ಪುಟಕ್ಕೆ**

## ಪ್ರಚೋದಿಸಿ ಸಂಘರ್ಷಕ್ಕೆ ಕಾರಣವಾಗಬಾರದು –ಅಧಿಕಾರಿ

**ಮಂಗಳೂರು:** 85 ವರ್ಷ ಪ್ರಾಯದ ಮುದುಕರು 18 ವರ್ಷದ ಯುವಕರನ್ನು ಮತೀಯವಾಗಿ ಪ್ರಚೋದನೆಗೊಳಿಸಿ ಸಂಘರ್ಷಕ್ಕೆ ಕಾರಣವಾಗುವ ಕೃತ್ಯಗಳು ಕೊನೆಯಾಗಬೇಕು. ಎಲ್ಲಾ ವಿಚಾರದಲ್ಲೂ ಮುಂಚೂಣಿಯಲ್ಲಿರುವ ಕರಾವಳಿಯಲ್ಲಿ ಮತೀಯ ವಿಚಾರಕ್ಕೆ ನಡೆಯುವ ಸಂಘರ್ಷಗಳಿಗೆ ಸಂಬಂಧಿಸಿ ಸರಕಾರ ಗಂಭೀರವಾಗಿ ಪರಿಗಣಿಸಿ, ನಮ್ಮ ಬೇಡಿಕೆಗೆ ಪೂರಕವಾಗಿ ಉತ್ತಮ ಅಧಿಕಾರಿಗಳನ್ನು ನೇಮಕ ಮಾಡಿದ್ದಾರೆ ಎಂದು ಜಯಶ್ರೀ ಕೃಷ್ಣ ಪರಿಸರ ಪ್ರೇಮಿ ಸಮಿತಿಯ ರಾಜ್ಯ ಸಂಯೋಜಕ ಜಗದೀಶ್ **3ನೇ ಪುಟಕ್ಕೆ**








# ಸುದ್ದಿ ತುಣುಕು

ಭಾರತವು ಬ್ರಿಕ್ಸ್ ಗುಂಪಿನ ಸದಸ್ಯ ಆಗಿರುವುದರಿಂದ ಸುಂಕ ವಿಧಿಸಲು ಕಾರಣವಾಗಿದೆ ಎಂದು ಭಾರತದ ವಸ್ತುಗಳ ಮೇಲೆ ಶೇ.25 ರಷ್ಟು ಸುಂಕ ವಿಧಿಸಿದ ಬಳಿಕ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಪ್ರತಿಪಾದಿಸಿದ್ದಾರೆ.

ಚಿಕ್ಕಮಗಳೂರು ಜಿಲ್ಲೆಯ ಕಡೂರು ತಾಲೂಕಿನ ರಸ್ತೆಯಲ್ಲಿ ಬೈಕ್‌ನಲ್ಲಿ ಸಂಚರಿಸುತ್ತಿದ್ದ ಇಬ್ಬರ ಮೇಲೆ ಚಿರತೆ ದಾಳಿ ಮಾಡಿದೆ.

ಕೇಂದ್ರ ಸರ್ಕಾರದ ಡೆಪ್ಯೂಟೇಷನ್ ಪಟ್ಟಿಯಲ್ಲಿ ಎಸ್‌ಐಟಿ ಮುಖ್ಯಸ್ಥ ಪ್ರಣವ್ ಮೊಹಂತಿ ಹೆಸರಿದ್ದು, ಅವರನ್ನು ಕೇಂದ್ರ ಸೇವೆಗೆ ಕಳುಹಿಸುವ ಬಗ್ಗೆ ರಾಜ್ಯ ಸರ್ಕಾರ ತೀರ್ಮಾನ ತೆಗೆದುಕೊಂಡಿಲ್ಲ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ.

ಬೆಂಗಳೂರಿನ ಕೊಡಿಗೇಹಳ್ಳಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಬೀದಿ ನಾಯಿಗಳು ಕಚ್ಚಿ ವೃದ್ಧ ಸೀತಪ್ಪ ಎಂಬುವರು ಮೃತಪಟ್ಟ ಪ್ರಕರಣಕ್ಕೆ ಸಂಬಂಧಿಸಿದಂತೆ ಲೋಕಾಯುಕ್ತದಲ್ಲಿ ಸ್ವಯಂ ಪ್ರೇರಿತ ಪ್ರಕರಣ ದಾಖಲಾಗಿದೆ.

ಬೆಂಗಳೂರು ನಗರದ ಅಪಾರ್ಟ್‌ಮೆಂಟ್ ಗೋಡೆಯೊಂದರ ಮೇಲೆ ಬಾಂಬ್ ಸ್ಫೋಟಿಸುವುದಾಗಿ ಬರೆದು ದುಷ್ಕರ್ಮಿಗಳು ಬೆದರಿಕೆ ಹಾಕಿದ್ದಾರೆ.

ಮಗುವಿನ ಚಿಕಿತ್ಸೆಗೆ ಹಣ ನೀಡುವುದಾಗಿ ನಂಬಿಸಿ ಮಹಿಳೆಗೆ 30,000 ರೂ. ಆನ್‌ಲೈನ್ ವಂಚಿಸಿರುವ ಬಗ್ಗೆ ಬ್ರಹ್ಮಾವರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

ಭಾರತದಿಂದ ಆಮದು ಮಾಡಿಕೊಳ್ಳುವ ವಸ್ತುಗಳ ಮೇಲೆ ಶೇ.25 ರಷ್ಟು ಸುಂಕವನ್ನು ಘೋಷಿಸಿದ ಒಂದು ದಿನದ ನಂತರ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭಾರತ ಮತ್ತು ರಷ್ಯಾವನ್ನು ಮತ್ತೆ ಟೀಕಿಸಿದ್ದಾರೆ.

ಸಾಮಾಜಿಕ ಜಾಲತಾಣಗಳಲ್ಲಿ ಅಲ್‌ಖೈದಾ ಭಯೋತ್ಪಾದಕ ಸಂಘಟನೆ ಪರ ಪ್ರಚಾರ ನಡೆಸುತ್ತಿದ್ದ ಹಾಗೂ ಉಗ್ರರ ಸಂಘಟನೆಗಳ ಮುಖಂಡರ ಪ್ರಚೋದನಕಾರಿ ಭಾಷಣಗಳನ್ನು ಹಂಚಿಕೊಳ್ಳುತ್ತಿದ್ದ ಆರೋಪದ ಮೇಲೆ ಜಾರ್ಖಂಡ್‌ನ ಶಮಾ ಪರ್ವೀನ್‌ನ್ನು ಗುಜರಾತ್ ಭಯೋತ್ಪಾದನಾ ನಿಗ್ರಹ ದಳದ ಅಧಿಕಾರಿಗಳು ಬಂಧಿಸಿದ್ದಾರೆ.

ಡ್ರಗ್ಸ್ ದಂಧೆಯಲ್ಲಿ ತೊಡಗಿರುವವರ ವಿರುದ್ಧ ಸೂಕ್ತ ಕ್ರಮಕೈಗೊಳ್ಳಲು ಕೇಂದ್ರ ಗೃಹ ಸಚಿವಾಲಯ ಮುಂದಾಗಬೇಕು ಎಂದು ಮೈಸೂರು-ಕೊಡಗು ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಆಗ್ರಹಿಸಿದ್ದಾರೆ.

ಭಾರತದ ಪ್ರಧಾನಿ ನರೇಂದ್ರ ಮೋದಿ ಮತ್ತು ಹಣಕಾಸು ಸಚಿವೆ ನಿರ್ಮಲಾ ಸೀತರಾಮನ್ ಹೊರತುಪಡಿಸಿ ಉಳಿದೆಲ್ಲರಿಗೂ ಭಾರತದ ಆರ್ಥಿಕತೆ ನೆಲಕಚ್ಚಿದೆ ಎಂಬುದು ಮನವರಿಕೆಯಾಗಿದೆ ಲೋಕಸಭೆ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಹೇಳಿದ್ದಾರೆ.

ಬಿಜೆಪಿ ಶಾಸಕ ಎಚ್.ಕೆ.ಸುರೇಶ್ ಲಕ್ಷಾಂತರ ಮಹಿಳೆಯರಿಗೆ ಲಾಭವಾಗಿದೆ ಎಂದು ಶಕ್ತಿ ಯೋಜನೆಯನ್ನು ಶ್ಲಾಘಿಸಿ ಅಚ್ಚರಿ ಮೂಡಿಸಿದ್ದಾರೆ.

ಬಳ್ಳಾರಿ ನಗರದ ಟಿ.ಬಿ.ಸ್ಯಾನಿಟೋರಿಯಂ ಬಳಿ ಕಳೆದ ಎರಡು ದಿನಗಳ ಹಿಂದೆ ಕಾಣಿಸಿಕೊಂಡಿದ್ದ ಕರಡಿಯನ್ನು ಅರಣ್ಯ ಇಲಾಖೆಯ ಅರಣ್ಯಾಧಿಕಾರಿ ಹಾಗೂ ಸಿಬ್ಬಂದಿಗಳ ನಿರಂತರ ಕಾರ್ಯಾಚರಣೆಯಿಂದ ಯಶಸ್ವಿಯಾಗಿ ಸೆರೆಹಿಡಿದು ರಕ್ಷಿಸಲಾಗಿದೆ.

ಮಾಲೆಗಾಂವ್ ಸ್ಫೋಟ ಪ್ರಕರಣದಲ್ಲಿ ಮಾಜಿ ಸಂಸದೆ ಪ್ರಜ್ಞಾಸಿಂಗ್ ಠಾಕೂರ್ ಹಾಗೂ ಲೆಫ್ಟಿನೆಂಟ್ ಕರ್ನಲ್ ಪ್ರಸಾದ್ ಪುರೋಹಿತ್ ಸೇರಿದಂತೆ ಎಲ್ಲಾ ಆರೋಪಿಗಳನ್ನು ಖುಲಾಸೆಗೊಳಿಸಲಾಗಿದೆ.

## ಪತೋಲಿ




**ಬೇಕಾಗುವ ಸಾಮಗ್ರಿಗಳು :**

ಅಕ್ಕಿ – 250 ಗ್ರಾಂ

ಅರಿಶಿನದ ಎಲೆ – 10 ರಿಂದ 15

ಬೆಲ್ಲ – 250 ಗ್ರಾಂ

ತೆಂಗಿನ ಕಾಯಿ ತುರಿ – 1ಕಪ್

ಉಪ್ಪು – ರುಚಿಗೆ ತಕ್ಕಷ್ಟು,

ಏಲಕ್ಕಿ – ಸ್ವಲ್ಪ

**ಮಾಡುವ ವಿಧಾನ :**

ಮೊದಲಿಗೆ ಅಕ್ಕಿಯನ್ನು ಸುಮಾರು ನಾಲ್ಕರಿಂದ ಐದು ತಾಸು ನೀರಿನಲ್ಲಿ ನೆನೆಸಿಟ್ಟು, ನಂತರ ಅಕ್ಕಿಗೆ ರುಚಿಗೆ ತಕ್ಕಷ್ಟು ಉಪ್ಪು ಸೇರಿಸಿ ನುಣ್ಣಗೆ ಗಟ್ಟಿಯಾಗಿ ರುಬ್ಬಿಕೊಳ್ಳಬೇಕು. ನಂತರ ಅರಿಶಿನದ ಎಲೆಗಳನ್ನು ಎರಡೂ ಕಡೆ ಚೆನ್ನಾಗಿ ತೊಳೆದು ಶುಚಿಗೊಳಿಸಿಕೊಂಡು ಎಲೆಯ ತುದಿಯನ್ನು ಕತ್ತರಿಸಿಕೊಳ್ಳಬೇಕು. ನಂತರ ಬೆಲ್ಲವನ್ನು ಚೆನ್ನಾಗಿ ಪುಡಿಮಾಡಿ ಅದಕ್ಕೆ ತೆಂಗಿನಕಾಯಿಯ ಜೊತೆಗೆ ಏಲಕ್ಕಿ ಪುಡಿಯನ್ನು ಮಿಶ್ರಣ ಮಾಡಿ ಕಲಸಿಕೊಳ್ಳಬೇಕು, ನೀರಿನ ಅವಶ್ಯಕತೆ ಇರುವುದಿಲ್ಲ. ಈಗ ಇಡ್ಲಿ ಮಾಡುವ ಪಾತ್ರೆಗೆ ನೀರು ಹಾಕಿ ಹಬೆ ಆರಂಭವಾಗುತ್ತಿದ್ದಂತೆ ರುಬ್ಬಿದ ಮಿಶ್ರಣವನ್ನು ಎಲೆಗಳಿಗೆ ಹಚ್ಚಬೇಕು, ಹಚ್ಚಿದಾಗ ಸೋರುವ ಹಾಗಿರಬಾರದು ಈಗ ಹಿಟ್ಟಿನ ಮೇಲೆ ಕಾಯಿಬೆಲ್ಲ ಕಾಯಿ ಎಲೆಗಳನ್ನು ಮಡಚಿ ಹಬೆ ಆಡುವ ಪಾತ್ರೆಯಲ್ಲಿ ಇಟ್ಟು 30 ನಿಮಿಷ ಬೇಯಿಸಿದರೆ ರುಚಿಕರವಾದ ಮತ್ತು ಆರೋಗ್ಯಕರವಾದ ಪತೋಲಿ ಸವಿಯಲು ಸಿದ್ದ.

# ರಷ್ಯಾದ ಕಮ್ಚಟ್ಕಾ ಪರ್ಯಾಯ ದ್ವೀಪದ ಬಳಿ ಪ್ರಬಲ ಭೂಕಂಪ




ಜಪಾನ್ : ಕಮ್ಚಟ್ಕಾ ಪರ್ಯಾಯ ದ್ವೀಪ ಭಾಗದಲ್ಲಿ ಬುಧವಾರ ಮುಂಜಾನೆ 8.7 ತೀವ್ರತೆಯ ಭೂಕಂಪ ಸಂಭವಿಸಿದ ಬೆನ್ನಲ್ಲೇ, ರಷ್ಯಾದ ಕುರಿಲ್ ದ್ವೀಪಗಳು ಮತ್ತು ಜಪಾನ್‌ನ ದೊಡ್ಡ ಉತ್ತರ ದ್ವೀಪ ಹೊಕ್ಕೈಡೊದ ಕರಾವಳಿ ಪ್ರದೇಶಗಳಿಗೆ ಸುನಾಮಿ ಅಪ್ಪಳಿಸಿದೆ. ಹಲವೆಡೆ ಸುನಾಮಿ ಎಚ್ಚರಿಕೆ ಸೈರನ್‌ಗಳು ಮೊಳಗಿದ್ದು, ಜನರಿಗೆ ಎತ್ತರದ ಪ್ರದೇಶಗಳಿಗೆ ಸ್ಥಳಾಂತರಗೊಳ್ಳುವಂತೆ ತಿಳಿಸಲಾಯಿತು. ಜಪಾನ್ ಹವಾಮಾನ ಸಂಸ್ಥೆ ಪ್ರಕಾರ, ಹೊಕ್ಕೈಡೊದ ಪೂರ್ವ ಕರಾವಳಿಯಲ್ಲಿರುವ ನೆಮುರೊದಲ್ಲಿ ಸುಮಾರು 30 ಸೆಂಟಿಮೀಟರ್‌ಗಳಷ್ಟು ಎತ್ತರದ ಮೊದಲ ಸುನಾಮಿ ಅಲೆಗಳು ಅಪ್ಪಳಿಸಿವೆ.

# ಯೆಮೆನ್‌ನಲ್ಲಿ ಭಾರತೀಯ ನರ್ಸ್ ಮರಣದಂಡನೆ ರದ್ದು




ನವದೆಹಲಿ: ಯೆಮೆನ್‌ನಲ್ಲಿ ಜೈಲಿನಲ್ಲಿರುವ ಭಾರತೀಯ ಪ್ರಜೆ ನಿಮಿಷಾ ಪ್ರಿಯಾ ಅವರ ಮರಣದಂಡನೆಯನ್ನು ಮಂಗಳವಾರ ರದ್ದುಗೊಳಿಸಲಾಗಿದೆ ಎಂದು ಭಾರತೀಯ ಗ್ರ್ಯಾಂಡ್ ಮುಫ್ತಿ ಕಚೇರಿ ಹೇಳಿಕೊಂಡಿದೆ ಎಂದು ಎಎನ್ಐ ವರದಿ ಮಾಡಿದೆ. ಸನಾದಲ್ಲಿ ನಡೆದ ಉನ್ನತ ಮಟ್ಟದ ಸಭೆಯಲ್ಲಿ "ಈ ಹಿಂದೆ ತಾತ್ಕಾಲಿಕವಾಗಿ ಅಮಾನತುಗೊಳಿಸಲಾಗಿದ್ದ ಮರಣದಂಡನೆಯನ್ನು ಸಂಪೂರ್ಣವಾಗಿ ರದ್ದುಗೊಳಿಸಲು" ನಿರ್ಧರಿಸಲಾಗಿದೆ ಎಂದು ಭಾರತೀಯ ಗ್ರ್ಯಾಂಡ್ ಮುಫ್ತಿ, ಕಾಂತಪುರಂ ಅಬುಬಕ್ಕರ್ ಮುಸ್ಲಿಯರ್ ಅವರ ಕಚೇರಿ ತಿಳಿಸಿದೆ.

# ಇಸ್ರೇಲ್ ದಾಳಿಯಿಂದ ಕಂಗೆಟ್ಟ ಪ್ಯಾಲೆಸ್ಟೈನ್



ಗಾಜ : ಗಾಜಾ ಪಟ್ಟಿಯಲ್ಲಿ ಇಸ್ರೇಲ್ ದಾಳಿ ಮುಂದುವರೆಸಿದ್ದು, ಈ ಗುಂಡಿನ ದಾಳಿಯಲ್ಲಿ 78 ಜನ ಪ್ಯಾಲೆಸ್ತೀನಿಯರು ಸಾವನ್ನಪ್ಪಿದ್ದಾರೆ. ಈ ಸಮಯದಲ್ಲಿ ಗರ್ಭಿಣಿಯೊಬ್ಬರು ಮಗುವಿಗೆ ಜನ್ಮ ನೀಡಿದ ತಕ್ಷಣವೇ ಅವರು ಸಾವನ್ನಪ್ಪಿದ್ದಾರೆ ಎಂದು ಸ್ಥಳೀಯ ಆರೋಗ್ಯ ಅಧಿಕಾರಿಗಳು ತಿಳಿಸಿದ್ದಾರೆ. ಹಾಗೇ ಇಸ್ರೇಲ್ ನೆರವಿನ ಪ್ರವೇಶದ ನಿರ್ಬಂಧ ಸಡಿಸಲು ಮುಂದಾದ ಹಿನ್ನೆಲೆ ಆಹಾರ ಅರಸುತ್ತಿದ್ದ ನೂರಾರು ಜನರ ಕೂಡ ಈ ದಾಳಿಯಲ್ಲಿ ಮೃತಪಟ್ಟಿದ್ದಾರೆ. ಗಾಜಾದಲ್ಲಿ ಹಸಿವಿನ ಬಿಕ್ಕಟ್ಟಿನಿಂದ ಜನರು ಕಂಗೆಟ್ಟಿದ್ದಾರೆ.

# ಪಾಕಿಸ್ತಾನ ಆಕ್ರಮಿತ ಗಿಲ್ಗಿಟ್ – ಬಾಲ್ಟಿಸ್ತಾನ್ ಪ್ರದೇಶದಲ್ಲಿ ಪ್ರವಾಹ




ಪಾಕಿಸ್ತಾನ: ಪಾಕಿಸ್ತಾನ ಆಕ್ರಮಿತ ಗಿಲ್ಗಿಟ್ – ಬಾಲ್ಟಿಸ್ತಾನ್ (PoGB) ಪ್ರದೇಶದಲ್ಲಿ ಸಂಭವಿಸಿದ ಪ್ರವಾಹದಲ್ಲಿ ಸಾವನ್ನಪ್ಪಿದವರ ಸಂಖ್ಯೆ 10ಕ್ಕೆ ತಲುಪಿದೆ. ರಕ್ಷಣಾ ಕಾರ್ಯಾಚರಣೆ ಮುಂದುವರೆದಿದ್ದು, ಅಪಾಯದಲ್ಲಿ ಸಿಲುಕಿಕೊಂಡಿರುವ ಪ್ರವಾಸಿಗರನ್ನು ಸುರಕ್ಷಿತ ಪ್ರದೇಶಗಳಿಗೆ ಸ್ಥಳಾಂತರಿಸಲಾಗುತ್ತಿದೆ ಎಂದು ಭಾನುವಾರ ಅಧಿಕಾರಿಗಳನ್ನು ಉಲ್ಲೇಖಿಸಿ ಡಾನ್ ವರದಿ ಮಾಡಿದೆ. ಈ ಪ್ರದೇಶವು ಹವಾಮಾನ ಬದಲಾವಣೆಯ ಆತಂಕಕಾರಿ ಪರಿಣಾಮಗಳನ್ನು ಎದುರಿಸುತ್ತಿದೆ. ಏರುತ್ತಿರುವ ತಾಪಮಾನ, ಅನಿರೀಕ್ಷಿತ ಹವಾಮಾನ ಮತ್ತು ಹಿಮನದಿ ಕರಗುವಿಕೆ ಹಾಗೂ ಮೇಘ ಸ್ಫೋಟಗಳಿಂದಾಗಿ ತೀವ್ರ ಪ್ರವಾಹ ಉಂಟಾಗಿದೆ.

# ಅಮೆರಿಕನ್ ಏರ್‌ಲೈನ್ಸ್ ವಿಮಾನದಲ್ಲಿ ಬೆಂಕಿ




ಡೆನ್ವರ್: ಡೆನ್ವರ್ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಅಮೆರಿಕನ್ ಏರ್‌ಲೈನ್ಸ್ ವಿಮಾನದಲ್ಲಿ ಬೆಂಕಿ ಕಾಣಿಸಿಕೊಂಡರೂ ಅದೃಷ್ಟವಶಾತ್ 173 ಪ್ರಯಾಣಿಕರು ಪ್ರಾಣಾಪಾಯದಿಂದ ಪಾರಾಗಿದ್ದಾರೆ. ಮಿಯಾಮಿಗೆ ತೆರಳುತ್ತಿದ್ದ ಅಮೇರಿಕನ್ ಏರ್‌ಲೈನ್ಸ್ (ಬೋಯಿಂಗ್ 737MAX8) ವಿಮಾನವು ಡೆನ್ವರ್ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಟೇಕ್ ಆಫ್ ಆಗುವ ಕೆಲವೇ ಸೆಕೆಂಡುಗಳ ಮೊದಲು ಲ್ಯಾಂಡಿಂಗ್ ಗೇರ್‌ನಲ್ಲಿ ಸಮಸ್ಯೆ ಉಂಟಾದ ಪರಿಣಾಮ ರನ್‌ವೇಲ್ಲಿ ಬೆಂಕಿಕಾಣಿಸಿಕೊಂಡಿದೆ.

# ಭಾರತ, ಚೀನಾದಂತಹ ದೇಶಗಳಿಂದ ಉದ್ಯೋಗಿಗಳನ್ನು ನೇಮಿಸಿಕೊಳ್ಳಬೇಡಿ



ವಾಷಿಂಗ್ಟನ್ : ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು 'ಮೇಕ್ ಅಮೆರಿಕ ಗ್ರೇಟ್ ಅಗೇನ್' ಎಂಬ ಘೋಷಣೆಯನ್ನು ಚಾಚೂತಪ್ಪದೆ ಪಾಲಿಸುತ್ತಿದ್ದಾರೆ. ವಿಶ್ವದ ಹಲವು ರಾಷ್ಟ್ರಗಳ ಮೇಲೆ ಸುಂಕ ಸಮರ ಸಾರಿದ್ದ ಟ್ರಂಪ್ ಇದೀಗ, ಭಾರತದ ಕಡೆ ತಮ್ಮ ವಕ್ರದೃಷ್ಟಿಯನ್ನು ಬೀರಿದ್ದಾರೆ. ಭಾರತ, ಚೀನಾದಂತಹ ದೇಶಗಳಿಂದ ಉದ್ಯೋಗಿಗಳನ್ನು ನೇಮಿಸಿಕೊಳ್ಳಬೇಡಿ. ಅಮೆರಿಕನ್ನರಿಗೆ ಮೊದಲ ಆದ್ಯತೆ ನೀಡಿ ಎಂದು ಗೂಗಲ್, ಮೈಕ್ರೋಸಾಫ್ಟ್‌ನಂತಹ ದೈತ್ಯ ಕಂಪನಿಗಳಿಗೆ ಕರೆ ನೀಡಿದ್ದಾರೆ. ನಿಮ್ಮ ಆಯ್ಕೆ ಮತ್ತು ಆದ್ಯತೆ ಅಮೆರಿಕ ಮೊದಲಾಗಿರಬೇಕು ಎಂದು ತಾಕೀತು ಮಾಡಿದ್ದಾರೆ.

# ಮಹಿಳಾ ಚೆಸ್ ವಿಶ್ವಕಪ್ ಗೆದ್ದ ದಿವ್ಯಾ ದೇಶ್‌ಮುಖ್



ಜಾರ್ಜಿಯಾ : ಫಿಡೆ ಮಹಿಳಾ ವಿಶ್ವಕಪ್ ಫೈನಲ್ ಪಂದ್ಯದಲ್ಲಿ ಟೈ ಬ್ರೇಕರ್ ಮೂಲಕ ಜಯ ಸಾಧಿಸಿದ ದಿವ್ಯಾ ದೇಶ್‌ಮುಖ್ ವಿಶ್ವ ಚಾಂಪಿಯನ್ ಪಟ್ಟಕ್ಕೇರಿದ್ದಾರೆ. ಭಾರತದವರೇ ಆದ ಕೊನೆರು ಹಂಪಿ ಅವರನ್ನು ಫೈನಲ್‌ನಲ್ಲಿ ಸೋಲಿಸಿದ ದಿವ್ಯಾ ಮಹಿಳಾ ವಿಶ್ವಕಪ್ ಗೆದ್ದ ಮೊದಲ ಭಾರತೀಯ ಎಂಬ ದಾಖಲೆ ಬರೆದಿದ್ದಾರೆ. ಆರಂಭದಿಂದಲೇ ಸಮಬಲದ ಪಂದ್ಯವಾಗಿದ್ದ ಈ ಕ್ಲಾಸಿಕಲ್ ಸುತ್ತು ಭಾನುವಾರ ಸಮಬಲದಲ್ಲಿ ಕೊನೆಗೊಂಡು ಫೈನಲ್ ಪಂದ್ಯವನ್ನು ಟೈ-ಬ್ರೇಕರ್‌ಗೆ ತಳ್ಳಿತ್ತು. ಸೋಮವಾರ ದಿವ್ಯಾ ಟೈ-ಬ್ರೇಕರ್‌ನಲ್ಲಿ 1.5-0.5 ಅಂಕಗಳಿಂದ ಗೆದ್ದು ಐತಿಹಾಸಿಕ ಗೆಲುವು ಸಾಧಿಸಿದರು. ಈ ಮೂಲಕ ಇತಿಹಾಸ ಪುಸ್ತಕಗಳಲ್ಲಿ ತಮ್ಮ ಹೆಸರನ್ನು ಬರೆಯಲು ಯಶಸ್ವಿಯಾದರು.

# ಹಲವು ದಾಖಲೆಗಳ ವೀರನಾದ ಶುಭಮನ್ ಗಿಲ್




ಮ್ಯಾಂಚೆಸ್ಟರ್: ಆತಿಥೇಯ ಇಂಗ್ಲೆಂಡ್ ವಿರುದ್ಧದ ಟೆಸ್ಟ್ ಕ್ರಿಕೆಟ್ ಸರಣಿಯಲ್ಲಿ ಅಮೋಘ ಬ್ಯಾಟಿಂಗ್ ಪ್ರದರ್ಶನ ಮುಂದುವರಿಸಿರುವ ಟೀಂ ಇಂಡಿಯಾ ನಾಯಕ ಶುಭಮನ್ ಗಿಲ್, ಹಲವು ದಾಖಲೆಗಳನ್ನು ತಮ್ಮ ಹೆಸರಿಗೆ ಬರೆದುಕೊಂಡಿದ್ದಾರೆ. ಮ್ಯಾಂಚೆಸ್ಟರ್‌ನಲ್ಲಿ ನಡೆದ 4ನೇ ಪಂದ್ಯದಲ್ಲಿ ಮೊದಲು ಬ್ಯಾಟಿಂಗ್ ಮಾಡಿದ್ದ ಭಾರತ, ಪ್ರಥಮ ಇನಿಂಗ್ಸ್‌ನಲ್ಲಿ 358 ರನ್ ಗಳಿಸಿ ಆಲೌಟ್ ಆಗಿತ್ತು. ಇದಕ್ಕುತ್ತರವಾಗಿ ಇಂಗ್ಲೆಂಡ್ ತಂಡ ನಾಯಕ ಬೆನ್ ಸ್ಟೋಕ್ಸ್ ಹಾಗೂ 'ಟೆಸ್ಟ್ ಪರಿಣತ' ಜೋ ರೂಟ್ ಗಳಿಸಿದ ಶತಕಗಳ ಬಲದಿಂದ 669 ರನ್ ಗಳಿಸಿತ್ತು. 311 ರನ್‌ಗಳ ಹಿನ್ನಡೆ ಹಾಗೂ ಸೋಲಿನ ಭೀತಿಯಲ್ಲೇ ಎರಡನೇ ಇನಿಂಗ್ಸ್ ಆಡಿದ ಭಾರತ 4 ವಿಕೆಟ್‌ಗೆ 425 ರನ್ ಗಳಿಸುವ ಮೂಲಕ ಪಂದ್ಯವನ್ನು ಡ್ರಾ ಮಾಡಿಕೊಂಡಿದೆ. ಭಾರತ ಪರ ನಾಯಕ ಗಿಲ್ (103 ರನ್), ಆಲ್‌ರೌಂಡರ್‌ಗಳಾದ ರವೀಂದ್ರ ಜಡೇಜ (ಅಜೇಯ 107 ರನ್), ವಾಷಿಂಗ್ಟನ್ ಸುಂದರ್ (ಅಜೇಯ 101 ರನ್)ಶತಕ ಸಿಡಿಸಿದರೆ, ಅನುಭವಿ ಕೆ.ಎಲ್. ರಾಹುಲ್ (90 ರನ್) ಅರ್ಧಶತಕ ಸಿಡಿಸುವ ಮೂಲಕ ಸೋಲು ತಪ್ಪಿಸಿಕೊಳ್ಳಲು ನೆರವಾದರು.

# ಸೆಸ್ ಹೆಚ್ಚಳದಿಂದ ಕಾರ್ಮಿಕರ ಬೇಡಿಕೆ ಈಡೇರಿಸಬಹುದು : ಸಂತೋಷ್ ಲಾಡ್




ಬೆಳಗಾವಿ: ಪೆಟ್ರೋಲ್, ಡೀಸೆಲ್ ಮೇಲಿನ ಸೆಸ್ ಸ್ವಲ್ಪ ಹೆಚ್ಚಿಸಿ, ಅದರಿಂದ ಬರುವ ಆದಾಯವನ್ನು ಕಾರ್ಮಿಕರ ಕಲ್ಯಾಣಕ್ಕೆ ಬಳಸಲು ಉದ್ದೇಶಿಸಲಾಗಿದೆ. ಈ ಬಗ್ಗೆ ಮುಖ್ಯಮಂತ್ರಿಗಳಿಗೆ ಮನವರಿಕೆ ಮಾಡಿಕೊಡುತ್ತೇವೆ ಎಂದು ಕಾರ್ಮಿಕ ಸಚಿವ ಸಂತೋಷ ಲಾಡ್ ತಿಳಿಸಿದರು. ಶ್ರಮಿಕರ ತಾತ್ಕಾಲಿಕ ವಸತಿ ಸಮುಚ್ಚಯ ಉದ್ಘಾಟಿಸಿ, ಅಸಂಘಟಿತ ವಲಯದ ಕಾರ್ಮಿಕರಿಗೆ ಸ್ಮಾರ್ಟ್‌ಕಾರ್ಡ್ ವಿತರಿಸಿ ಅವರು ಮಾತನಾಡಿದರು. ಕಾರ್ಮಿಕರ ಮಕ್ಕಳಿಗಾಗಿ ಮೂರು ವಸತಿ ಶಾಲೆಗಳನ್ನು ಸರ್ಕಾರ ಮಂಜೂರು ಮಾಡಿದೆ. ಇವುಗಳ ಪ್ರಗತಿ ಗಮನಿಸಿ ಮತ್ತಷ್ಟು ಶಾಲೆಗಳನ್ನು ನಿರ್ಮಾಣ ಮಾಡಲಾಗುವುದು ಎಂದರು.

# ಆಸ್ತಿ ನೋಂದಣಿಗೆ ಜನರಲ್ ಪವರ್ ಆಟಾರ್ನಿ ಕಡ್ಡಾಯ!


ಕರ್ನಾಟಕ ರಾಜ್ಯಪತ್ರ

ಬೆಂಗಳೂರು: ಆಸ್ತಿ ನೋಂದಣಿಗೆ ಜನರಲ್ ಪವರ್ ಆಟಾರ್ನಿ ಕಡ್ಡಾಯಗೊಳಿಸುವ ನೋಂದಣಿ ಕರ್ನಾಟಕ (ತಿದ್ದುಪಡಿ) ಅಧಿನಿಯಮ 2025ಕ್ಕೆ ರಾಷ್ಟ್ರಪತಿಗಳು ಅಂಕಿತ ಹಾಕಿದ್ದಾರೆ. ಈ ಸಂಬಂಧ ರಾಜ್ಯ ಸರ್ಕಾರ ಸೋಮವಾರ ಅಧಿಕೃತ ರಾಜ್ಯ ಪತ್ರ ಹೊರಡಿಸಿದ್ದು, ರಾಜ್ಯ ಪತ್ರ ಹೊರಡಿಸಿದ ದಿನದಿಂದಲೇ ಈ ಮಸೂದೆ ಜಾರಿಗೆ ಬರಲಿದೆ. ನೋಂದಣಿ ಅಧಿನಿಯಮ 19008 (1908ರ ಕೇಂದ್ರ ಅಧಿನಿಯಮ 16) ಅನ್ನು ಮತ್ತಷ್ಟು ತಿದ್ದುಪಡಿ ಮಾಡಿ ಕೆಲವು ಬದಲಾವಣೆ ಒಳಗೊಂಡ ಮಸೂದೆ ಇದಾಗಿದೆ. ಆಸ್ತಿ ನೋಂದಣಿಯನ್ನು ಸಂಪೂರ್ಣ ಡಿಜಟಲೀಕರಿಸುವ, ಪಾರದರ್ಶಕತೆ ಹೆಚ್ಚಿಸುವ ಬಗ್ಗೆ ಈ ತಿದ್ದುಪಡಿ ತರಲಾಗಿದೆ.

# ಮೈಸೂರಿನಲ್ಲಿ ಯೂನಿಟಿ ಮಾಲ್ ನಿರ್ಮಾಣ-ಒಡೆಯರ್




ಮೈಸೂರು: "ಅರಮನೆ ಮುಂಭಾಗದ ವಸ್ತು ಪ್ರದರ್ಶನ ಆವರಣದಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಗೆ ಕೇಂದ್ರ ಸರ್ಕಾರದ ಸಹಕಾರದಿಂದ ಸ್ಥಳೀಯ ಉತ್ಪನ್ನಗಳ ಮಾರಾಟ ಹಾಗೂ ಇತರ ಮಾರಾಟ ಮಳಿಗೆಗಳನ್ನು ತೆರೆಯಲು 193 ಕೋಟಿ ರೂ ವೆಚ್ಚದಲ್ಲಿ ಯೂನಿಟಿ ಮಾಲ್ ನಿರ್ಮಾಣ ಮಾಡಲಾಗುವುದು" ಎಂದು ಸಂಸದ ಯದುವೀರ್ ಒಡೆಯರ್ ತಿಳಿಸಿದರು. ಅಂಬಾವಿಲಾಸ ಅರಮನೆ ಮುಂಭಾಗದ ದಸರಾ ವಸ್ತುಪ್ರದರ್ಶನ ಆವರಣದಲ್ಲಿ 193 ಕೋಟಿ ವೆಚ್ಚದಲ್ಲಿ ಯೂನಿಟಿ ಮಾಲ್ ನಿರ್ಮಾಣ ಮಾಡಲಾಗುತ್ತಿದೆ. ಅದರಲ್ಲಿ ಮೈಸೂರು ಪರಂಪರೆಯನ್ನು ಬಿಂಬಿಸುವ ವಸ್ತುಗಳು ಹಾಗೂ ಲೋಕಲ್ ಪ್ರಾಜೆಕ್ಟ್‌ಗಳಿಗೆ ಮೊದಲ ಆದ್ಯತೆ ನೀಡಲಾಗುತ್ತದೆ" ಎಂದು ಹೇಳಿದರು.

# ಪಂಚ ಗ್ಯಾರಂಟಿಗಳಿಗಾಗಿ ಸುಮಾರು 51,034 ಕೋಟಿ ರೂ.!



ಬೆಂಗಳೂರು: ಪ್ರಸಕ್ತ ಬಜೆಟ್ ವರ್ಷದಲ್ಲಿ ಸಿಎಂ ಸಿದ್ದರಾಮಯ್ಯ ಪಂಚ ಗ್ಯಾರಂಟಿಗಳಿಗಾಗಿ ಸು. 51,034 ಕೋಟಿ ರೂ. ಅನುದಾನ ನೀಡಿದ್ದಾರೆ. ಬಂಡವಾಳ ವೆಚ್ಚಕ್ಕಾಗಿ ಅಂದಾಜು 71,336 ಕೋಟಿ ರೂ. ಅನುದಾನ ಹಂಚಿಕೆ ಮಾಡಲಾಗಿದೆ. ಇದೀಗ ಬಜೆಟ್ ವರ್ಷದ ಮೊದಲ ತ್ರೈಮಾಸಿಕ ಮುಕ್ತಾಯವಾಗಿದ್ದು, ಬಂಡವಾಳ ವೆಚ್ಚದ ರೂಪದಲ್ಲಿ ಹಣ ವ್ಯಯಿಸಿರುವುದು ಅತ್ಯಲ್ಪವಾಗಿದೆ. 2025 -26 ಬಜೆಟ್ ವರ್ಷದ ಮೊದಲ ತ್ರೈಮಾಸಿಕ ದಲ್ಲಿ ಕಾಂಗ್ರೆಸ್ ಸರ್ಕಾರ ಮತ್ತೆ ಬಂಡವಾಳ ವೆಚ್ಚ ಮಾಡುವಲ್ಲಿ ಹಿಂದೆ ಬಿದ್ದಿದೆ. ಹಣಕಾಸು ಇಲಾಖೆ ನೀಡಿದ ಅಂಕಿ-ಅಂಶದಂತೆ ಮೊದಲ ತ್ರೈಮಾಸಿಕದಲ್ಲಿ 7.56% ಬಂಡವಾಳ ವೆಚ್ಚಮಾಡಿದೆ.

# ರಸಗೊಬ್ಬರ ಅಭಾವ, ನಕಲಿ ಕೃಷಿ ಬೀಜಗಳಿಗೆ ಸರ್ಕಾರವೇ ಹೊಣೆ




ಬೆಂಗಳೂರು : ರಾಜ್ಯದಲ್ಲಿ ರಸಗೊಬ್ಬರ ಕಳ್ಳ ದಂಧೆ ನಡೆಯುತ್ತಿದೆ. ರಸಗೊಬ್ಬರ ಅಭಾವ, ನಕಲಿ ಕೃಷಿ ಬೀಜಗಳಿಗೆ ಸರ್ಕಾರವೇ ಹೊಣೆ. ರಾಜ್ಯಾದ್ಯಂತ ಬಿಜೆಪಿ ಹೋರಾಟ ಮಾಡಲಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದರು. ಬಿ ಎಸ್ ಯಡಿಯೂರಪ್ಪ ಅವರು ಸಿಎಂ ಆಗಿದ್ದಾಗ ದಾಸ್ತಾನು ಇಡ್ತಿದ್ರು, ಅದಕ್ಕೆ ಅನುದಾನ ಕೂಡ ಇಡ್ತಿದ್ರು. ಈ ಸರ್ಕಾರ ದಾಸ್ತಾನು ಅನುದಾನ ಕೂಡ ಕಡಿತ ಮಾಡಿದೆ. ಮುಂಗಾರು ಶೀಘ್ರ ಆರಂಭ ಆಯ್ತು, ರಾಜ್ಯ ಸರ್ಕಾರ ಎಚ್ಚೆತ್ತುಕೊಳ್ಳಲಿಲ್ಲ ಎಂದು ಟೀಕಿಸಿದರು.

# ಎಫ್‌ಐಆರ್ ದಾಖಲಿಸಲು ಮೇಲಧಿಕಾರಿಗಳ ಅನುಮತಿ ಕಡ್ಡಾಯ



ಬೆಂಗಳೂರು: ಭಾರತೀಯ ನ್ಯಾಯ ಸಂಹಿತೆಯ ನಾಲ್ಕು ಕಾಯ್ದೆಗಳಡಿ ಎಫ್‌ಐಆರ್ ದಾಖಲಿಸುವ ಮುನ್ನ ತನಿಖಾಧಿಕಾರಿಗಳು ಕಡ್ಡಾಯವಾಗಿ ಮೇಲಾಧಿಕಾರಿಗಳ ಅನುಮತಿ ಪಡೆಯುವಂತೆ ರಾಜ್ಯ ಪೊಲೀಸ್ ಮಹಾನಿರ್ದೇಶಕ ಡಾ ಎಂ.ಎ. ಸಲೀಂ ಅವರು ಸುತ್ತೋಲೆ ಹೊರಡಿಸಿದ್ದಾರೆ. ಬಿಎನ್‌ಎಸ್‌ನ 304, 103(2), 111 ಹಾಗೂ 113(ಃ) ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಳ್ಳುವ ಮುನ್ನ ಮೇಲಾಧಿಕಾರಿಗಳ ಅನುಮತಿ ಪಡೆಯುವುದು ಕಡ್ಡಾಯವಾಗಿರಲಿದೆ. ಬಿಎನ್‌ಎಸ್ 304, 103(2) ಹಾಗೂ 111 ಕಾಯ್ದೆ ಅಡಿ ಪ್ರಕರಣ ದಾಖಲಿಸಿಕೊಳ್ಳಲು ಜಿಲ್ಲಾ ಮಟ್ಟದಲ್ಲಿ ಎಎಸ್‌ಪಿ ಹಾಗೂ ಕಮೀಷನರೇಟ್ ವ್ಯಾಪ್ತಿಯಲ್ಲಿ ಡಿಸಿಪಿ ಹಂತದ ಅಧಿಕಾರಿಗಳಿಂದ ಲಿಖಿತ ಅನುಮತಿ ಪಡೆದಿರಬೇಕು.

# ವರದಿಯೇ ಅಂತಿಮ. ಅಪಸ್ವರ ಎತ್ತಿದರೆ ಯಥಾಸ್ಥಿತಿ ಮುಂದುವರಿಕೆ




ಬೆಳಗಾವಿ: ಕರ್ನಾಟಕ-ಮಹಾರಾಷ್ಟ್ರ ಗಡಿ ವಿಚಾರದಲ್ಲಿ ಮಹಾಜನ್ ವರದಿಯೇ ಅಂತಿಮ. ಒಂದು ವೇಳೆ ಆ ವರದಿಗೆ ಅಪಸ್ವರ ಎತ್ತಿದರೆ ಯಥಾಸ್ಥಿತಿ ಮುಂದುವರಿಯುವುದು ಕರ್ನಾಟಕದ ಕೊನೆಯ ನಿಲುವು ಆಗಿದೆ ಎಂದು ಗಡಿ ಎಂದು ಗಡಿ ಉಸ್ತುವಾರಿ ಸಚಿವರೂ ಆಗಿರುವ ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಪ್ರವಾಸೋದ್ಯಮ ಇಲಾಖೆಯ ಸಚಿವರಾದ ಹೆಚ್.ಕೆ.ಪಾಟೀಲ ಹೇಳಿದರು. ಬೆಳಗಾವಿ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಗಡಿ ಭಾಗದ ಕನ್ನಡಪರ ಸಂಘಟನೆಗಳ ಮುಖಂಡರ ಜತೆಗೆ ಸಭೆ ನಡೆಸಿದ ಬಳಿಕ ಮಾಧ್ಯಮಗೋಷ್ಠಿಯಲ್ಲಿ ಅವರು ಮಾತನಾಡಿದರು.

# ಪವಿತ್ರ ಅಮರನಾಥ ಯಾತ್ರೆ ಭಾರಿ ಮಳೆಯಿಂದ ಮತ್ತೆ ಸ್ಥಗಿತ




ಜಮ್ಮು ಕಾಶ್ಮೀರ: ಕಣಿವೆ ನಾಡಿನಲ್ಲಿ ಭಾರಿ ಮಳೆ ಮುಂದುವರೆದ ಹಿನ್ನೆಲೆಯಲ್ಲಿ ಇಂದು ಅಮರನಾಥ ಯಾತ್ರೆಯನ್ನು ಮತ್ತೊಮ್ಮೆ ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ. ಪಹಲ್ಗಾಮ್ ಮತ್ತು ಬಲ್ತಾಲ್‌ನ ಬೇಸ್ ಕ್ಯಾಂಪ್ ಭಾಗದಲ್ಲಿ ಭಾರೀ ಮಳೆಯಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಈ ಕುರಿತು ಪೋಸ್ಟ್ ಮಾಡಿರುವ ಜಮ್ಮು ಮತ್ತು ಕಾಶ್ಮೀರದ ಡಿಐಪಿಆರ್, ಪಹಲ್ಗಾಮ್ ಮತ್ತು ಬಲ್ತಾಲ್ ಮಾರ್ಗವಾಗಿ ಸಾಗುವ ಅಮರನಾಥ ಯಾತ್ರೆಯನ್ನು ಇಂದು ಸ್ಥಗಿತಗೊಳಿಸಲಾಗಿದೆ ಎಂದು ಮಾಹಿತಿ ಹಂಚಿಕೊಂಡಿದ್ದಾರೆ. ಜುಲೈ 9ರಂದು ಕೂಡ ಭಾರೀ ಮಳೆ ಹಿನ್ನೆಲೆಯಲ್ಲಿ ಯಾತ್ರೆಯನ್ನು ಸ್ಥಗಿತಮಾಡಲಾಗಿತ್ತು' ಎಂದು ತಿಳಿಸಿದರು.

# 'ಆಪರೇಷನ್ ಶಿವಶಕ್ತಿ' : ಭಯೋತ್ಪಾದಕರ ಹತ್ಯೆ



ಜಮ್ಮು ಕಾಶ್ಮೀರ: ಪಹಲ್ಗಾಮ್ ದಾಳಿಯಲ್ಲಿ ಭಾಗಿಯಾಗಿದ್ದ ಮೂವರು ಭಯೋತ್ಪಾದಕರನ್ನು ಕಾಶ್ಮೀರದ ದಚಿಗಾಮ್ ಅರಣ್ಯದಲ್ಲಿ ನಡೆದ ಎನ್‌ಕೌಂಟರ್‌ನಲ್ಲಿ ಹೊಡೆದುರುಳಿಸಿದ್ದ ಭಾರತೀಯ ಸೇನಾ ಪಡೆಗಳು, ಬುಧವಾರ ಪೂಂಚ್ ಜಿಲ್ಲೆಯಲ್ಲಿ 'ಆಪರೇಷನ್ ಶಿವಶಕ್ತಿ' ಕೈಗೊಂಡು ಇಬ್ಬರು ಭಯೋತ್ಪಾದಕರನ್ನು ಹತ್ಯೆ ಮಾಡಿವೆ. ಹತರಾದ ಉಗ್ರರಿಂದ ಶಸ್ತ್ರಾಸ್ತ್ರಗಳನ್ನು ವಶಪಡಿಸಿಕೊಳ್ಳಲಾಗಿದೆ. ಭಾರತೀಯ ಸೇನೆಯ ವೈಟ್ ನೈಟ್ ಕಾರ್ಪ್ಸ್ ಮಾಹಿತಿ ಪ್ರಕಾರ, ಇದು ಪಾಕಿಸ್ತಾನದ ದುಷ್ಕೃತ್ಯದ ಯೋಜನೆ ವಿರುದ್ಧ ಕೈಗೊಂಡ ಪ್ರಮುಖ ಕಾರ್ಯಾಚರಣೆಯಾಗಿದೆ. ಪೊಲೀಸರ ಮಾಹಿತಿ ಹಿನ್ನೆಲೆಯಲ್ಲಿ ಯಶಸ್ವಿ ಕಾರ್ಯಾಚರಣೆ ನಡೆಯಿತು.

# ದುಪ್ಪಟ್ಟು ಬೆಲೆಗೆ ರಸಗೊಬ್ಬರ ಮಾರಾಟ-ಸುಧಾಕರ್



ನವದೆಹಲಿ: ಕರ್ನಾಟಕದಲ್ಲಿ ಕಾಳಸಂತೆಯಲ್ಲಿ ದುಪ್ಪಟ್ಟು ಬೆಲೆಗೆ ರಸಗೊಬ್ಬರ ಮಾರಾಟ ಮಾಡಲಾಗುತ್ತಿದೆ ಎಂದು ಚಿಕ್ಕಬಳ್ಳಾಪುರ ಸಂಸದ ಡಾ.ಕೆ. ಸುಧಾಕರ್ ಆರೋಪಿಸಿದರು. ಲೋಕಸಭೆಯಲ್ಲಿ ಬುಧವಾರ ಶೂನ್ಯ ವೇಳೆಯಲ್ಲಿ ಮಾತನಾಡಿದ ಅವರು, 'ಮುಂಗಾರು ಅವಧಿ ಕೃಷಿಗೆ ನಿರ್ಣಾಯಕ. ಈ ಸಮಯದಲ್ಲಿ ಭತ್ತ, ಜೋಳ, ದ್ವಿದಳಧಾನ್ಯ, ಸೋಯಾಬಿನ್ ಸೇರಿದಂತೆ ವಿವಿಧ ಬೆಳೆಗಳನ್ನು ರೈತರು ಬೆಳೆಯುತ್ತಾರೆ. ಕೇಂದ್ರದ ಬಿಜೆಪಿ ಸರ್ಕಾರವು ಈ ಹಂಗಾಮಿನಲ್ಲಿ 8.13ಲಕ್ಷಟನ್ ಯೂರಿಯಾವನ್ನು ರಾಜ್ಯಕ್ಕೆ ಕಳುಹಿಸಿದೆ. ಕಾಂಗ್ರೆಸ್ ಸರ್ಕಾರದ ಅಸಮರ್ಪಕ ಆಡಳಿತದಿಂದ ರೈತರಿಗೆ ಭಾರಿ ತೊಂದರೆ ಆಗಿದೆ' ಎಂದು ಗಮನ ಸೆಳೆದರು.

# ಲೋಕಸಭೆಯಲ್ಲಿ ಆಪರೇಷನ್ ಸಿಂಧೂರ ಬಗ್ಗೆ ಮೋದಿ ಮಾತು




ನವದೆಹಲಿ : ಆಪರೇಷನ್ ಸಿಂಧೂರ್ ಕುರಿತ ಚರ್ಚೆಯ ವೇಳೆ ಪ್ರಧಾನಿ ನರೇಂದ್ರ ಮೋದಿ ಅವರು ತಮ್ಮ ಭಾಷಣವನ್ನು ಆರಂಭಿಸಿ, ಸಂಸತ್ತಿನ ಅಧಿವೇಶನವು "ಭಾರತದ ವಿಜಯೋತ್ಸವ" ವನ್ನು ಸೂಚಿಸುತ್ತದೆ ಎಂದು ಹೇಳಿದರು, ಮತ್ತು ಆಪರೇಷನ್ ಸಿಂಧೂರ ಸಮಯದ ಕದನ ವಿರಾಮದಲ್ಲಿ ಬೇರೆ ಯಾವುದೇ ದೇಶದ ನಾಯಕರ ಪಾತ್ರವಿಲ್ಲ ಎಂದು ಸ್ಪಷ್ಟಪಡಿಸಿದರು. ಪ್ರಧಾನಿ ನರೇಂದ್ರ ಮೋದಿ ಅವರು ಆಪರೇಷನ್ ಸಿಂಧೂರ್ ಕುರಿತು ತಮ್ಮ ಭಾಷಣವನ್ನು ಪ್ರಾರಂಭಿಸಿದರು. ಸಂಸತ್ತಿನ ಅಧಿವೇಶನವನ್ನು ಪಾಕಿಸ್ತಾನದ ವಿರುದ್ಧದ ವಿಜಯದ ಆಚರಣೆ ಎಂದು ಶ್ಲಾಘಿಸಿದರು. ಹಲವಾರು ವಿಷಯಗಳ ಬಗ್ಗೆ ಗಮನಸೆಳೆದರು.

# ಹಿಮಾಚಲ ಪ್ರದೇಶದಲ್ಲಿ ಭಾರಿ ಮಳೆಯಿಂದಾಗಿ ಪ್ರವಾಹ




ಹಿಮಾಚಲ ಪ್ರದೇಶ : ಹಿಮಾಚಲ ಪ್ರದೇಶದಲ್ಲಿ ಭಾರಿ ಮಳೆ ಸಾವುನೋವು, ನಷ್ಟ ಉಂಟುಮಾಡಿದೆ. ಮಂಡಿ ನಗರದ ಅನೇಕ ಪ್ರದೇಶಗಳಲ್ಲಿ ಪ್ರವಾಹ ಪರಿಸ್ಥಿತಿ ಇದೆ. ಐವರು ಕೊಚ್ಚಿ ಹೋಗಿದ್ದು, ಮೂವರ ಶವ ಸಿಕ್ಕಿದೆ. ಎರಡು ಶವಗಳು ವಾಹನದ ಮಧ್ಯೆ ಸಿಲುಕಿದ್ದು, ಎನ್‌ಡಿಆರ್‌ಎಫ್ ಪತ್ತೆ ಮಾಡಿದೆ. ಅವಶೇಷಗಳಲ್ಲಿ 60ಕ್ಕೂಹೆಚ್ಚು ವಾಹನಗಳು ಹೂತು ಹೋಗಿವೆ.



# ಕರಾವಳಿ ತರಂಗಿಣಿ ಸಿನಿ ತರಂಗಿಣಿ

## "ದಿ ಡೆವಿಲ್" ಚಿತ್ರೀಕರಣ-ಡಬ್ಬಿಂಗ್ ಮುಕ್ತಾಯ..



ಶ್ರೀ ಜೈ ಮಾತ ಕಂಬೈನ್ಸ್ ಲಾಂಛನದಲ್ಲಿ ಅದ್ದೂರಿಯಾಗಿ ನಿರ್ಮಾಣವಾಗುತ್ತಿರುವ, ಪ್ರಕಾಶ್ ವೀರ್ ಕಥೆ, ಚಿತ್ರಕಥೆ ಬರೆದು ನಿರ್ದೇಶಿಸುತ್ತಿರುವ ಹಾಗೂ ಚಾಲೆಂಜಿಂಗ್ ಸ್ಟಾರ್ ದರ್ಶನ್ ನಾಯಕರಾಗಿ ನಟಿಸಿರುವ "ದಿ ಡೆವಿಲ್" ಚಿತ್ರದ ಚಿತ್ರೀಕರಣ ಹಾಗೂ ಡಬ್ಬಿಂಗ್ ಮುಕ್ತಾಯವಾಗಿದೆ. ಪೋಸ್ಟ್ ಪ್ರೊಡಕ್ಷನ್ ವರ್ಕ್ ಬಿರುಸಿನಿಂದ ಸಾಗಿದೆ. ಬೆಂಗಳೂರು, ರಾಜಸ್ಥಾನ, ಬ್ಯಾಂಕಾಕ್ ಮುಂತಾದ ಕಡೆ ಚಿತ್ರೀಕರಣ ನಡೆದಿದೆ. ಇತ್ತೀಚೆಗೆ ಹಾಡುಗಳ ಚಿತ್ರೀಕರಣ ಬ್ಯಾಂಕಾಕ್‌ನಲ್ಲಿ ಮುಗಿಸಿರುವ ಚಿತ್ರತಂಡ ಭಾರತಕ್ಕೆ ಮರಳಿದೆ. ಇದರೊಂದಿಗೆ "ದಿ ಡೆವಿಲ್" ಚಿತ್ರದ ಚಿತ್ರೀಕರಣ ಮುಕ್ತಾಯವಾಗಿದೆ. ದರ್ಶನ್ ಸೇರಿದಂತೆ ಎಲ್ಲಾ ಕಲಾವಿದರ ಡಬ್ಬಿಂಗ್ ಸಹ ಪೂರ್ಣವಾಗಿದೆ. ಸದ್ಯದಲ್ಲೇ ಹಾಡೊಂದನ್ನು ಬಿಡುಗಡೆ ಮಾಡಿ ಆದಷ್ಟು ಬೇಗ ಚಿತ್ರವನ್ನು ತೆರೆಗೆ ತರುವುದಾಗಿ ನಿರ್ದೇಶಕರು ಹೇಳಿದ್ದಾರೆ.

## "ಕಸ್ಟಡಿ"-"ಪಾಲ್ಗುಣಿ" ಟ್ರೇಲರ್ ಬಿಡುಗಡೆ..



ನಾಗೇಶ್ ಕುಮಾರ್ ಯು.ಎಸ್ ನಿರ್ಮಿಸಿರುವ ಜೆ.ಜೆ.ಶ್ರೀನಿವಾಸ್ ನಿರ್ದೇಶಿಸಿರುವ "ಕಸ್ಟಡಿ" ಹಾಗೂ "ಪಾಲ್ಗುಣಿ" ಚಿತ್ರಗಳ ಟ್ರೇಲರ್ ಬಿಡುಗಡೆ ಸಮಾರಂಭ ಇತ್ತೀಚೆಗೆ ನೆರವೇರಿತು. ಕನ್ನಡಪರ ಹೋರಾಟಗಾರರಾದ ಸಾ.ರಾ.ಗೋವಿಂದು ಹಾಗೂ ಕನ್ನಡ ಚಲನ ಚಿತ್ರ ನಿರ್ಮಾಪಕರ ಸಂಘದ ಅಧ್ಯಕ್ಷ ಉಮೇಶ್ ಬಣಕಾರ್ ಎರಡು ಚಿತ್ರಗಳ ಟ್ರೇಲರ್ ಅನಾವರಣ ಮಾಡಿ ಚಿತ್ರತಂಡಕ್ಕೆ ಶುಭ ಕೋರಿದರು. ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷ ನರಸಿಂಹಲು, ಉಪಾಧ್ಯಕ್ಷ ಶಿಲ್ಪಾ ಶ್ರೀನಿವಾಸ್, ಕಾರ್ಯದರ್ಶಿ ಪ್ರವೀಣ್ ಕುಮಾರ್, ಕರ್ನಾಟಕ ಚಲನಚಿತ್ರ ನಿರ್ದೇಶಕರ ಸಂಘದ ಅಧ್ಯಕ್ಷ ಎನ್ನಾರ್ ಕೆ ವಿಶ್ವನಾಥ್, ನಿರ್ಮಾಪಕರಾದ ಭಾ. ಮ. ಹರೀಶ್, ಎಂ.ಜಿ.ರಾಮಮೂರ್ತಿ ಸೇರಿದಂತೆ ಚಿತ್ರರಂಗದ ಅನೇಕ ಗಣ್ಯರು ಸಮಾರಂಭಕ್ಕೆ ಆಗಮಿಸಿ ಶುಭ ಕೋರಿದರು.

## "ಪದ್ಮಗಂಧಿ" ಟ್ರೇಲರ್-ಹಾಡು ಲೋಕಾರ್ಪಣೆ

ಹಿರಿಯ ನಟ ಕ.ಸುಚೇಂದ್ರ ಪ್ರಸಾದ ಚಿತ್ರಕಥೆ-ಸಂಭಾಷಣೆ ಜತೆಗೆ ನಿರ್ದೇಶನ ಮಾಡಿರುವ 'ಪದ್ಮಗಂಧಿ' ಚಿತ್ರದ ಕನ್ನಡ, ಸಂಸ್ಕೃತ ಮತ್ತು ಹಿಂದಿ ಭಾಷೆಯ ಟ್ರೇಲರ್ ಹಾಗೂ ಹಾಡುಗಳ ಅನಾವರಣ ಕಾರ್ಯಕ್ರಮವು ಅದ್ದೂರಿಯಾಗಿ ನಡೆಯಿತು. ಮಾಜಿ ಎಂಎಲ್‌ಸಿ, ಅಂಕಣಕಾರ್ತಿ, ಸಂಸ್ಕೃತ ಭೂಮಿಕೆಯಲ್ಲಿ ನಾನಾ ದಿಕ್ಕಿನಲ್ಲಿ ಅಧ್ಯಯನ ನಡೆಸಿರುವ ನಿವೃತ ಪ್ರೊಫೆಸರ್ ಎಸ್.ಆರ್.ಲೀಲಾ ರಚಿಸಿ, ನಿರ್ಮಾಣ ಮಾಡಿರುವುದು ಹೊಸ ಅನುಭವ. ಶಂಕರ್ ಶಾನ್‌ಭೋಗ್ ಸೇರಿದಂತೆ ಹಲವು ಗಾಯಕರುಗಳು ಗೀತೆಯ ಸಾಲು ಹಾಡುವುದರ ಮೂಲಕ, ಹಾಗೂ ಕೋಟೆ ರಾಮಚಂದ್ರಭಟ್ ಸಂಸ್ಕೃತ ಭಾಷೆಯ ಟ್ರೇಲರ್ ಬಿಡುಗಡೆ ಮಾಡಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಡಾ.ದೀಪಕ್ ಪರಮಶಿವನ್ ಸಂಗೀತ, ನಾಗರಾಜ್ ಅದ್ವಾನಿ-ಗಿರಿಧರ್‌ದಿವಾನ್ ಛಾಯಾಗ್ರಹಣ, ಎನ್. ನಾಗೇಶ್ ನಾರಾಯಣಪ್ಪ ಸಂಕಲನವಿದೆ.



## ಏಳುಮಲೆಯಿಂದ ಬಂತು ಮೊದಲ ಹಾಡು..

ನಿರ್ದೇಶಕರು ಸಿನಿವಾ ನಿರ್ಮಾಣ ಮಾಡುವ ಮೂಲಕ ಹೊಸ ಪ್ರತಿಭೆಗಳಿಗೆ ಅವಕಾಶ ಕೊಡುತ್ತಿದ್ದಾರೆ. ಅಂತೆಯೇ ನಿರ್ದೇಶಕ ತರುಣ್ ಕಿಶೋರ್ ಸುಧೀರ್ ನಿರ್ಮಾಣ ಮಾಡುತ್ತಿರುವ ಏಳುಮಲೆ ಚಿತ್ರಕ್ಕೆ ಪುನೀತ್ ರಂಗಸ್ವಾಮಿ ನಿರ್ದೇಶನ ಮಾಡುತ್ತಿದ್ದು ಈ ಸಿನಿಮಾದ ಮೊದಲ ಹಾಡು ರಿಲೀಸ್ ಆಗಿದೆ. ಕನ್ನಡದ ಜೊತೆಗೆ ತೆಲುಗು, ತಮಿಳಿನಲ್ಲಿಯೂ ಗೀತೆಯನ್ನು ಅನಾವರಣ ಮಾಡಲಾಗಿದೆ. ನಾಗಾರ್ಜುನ್ ಶರ್ಮಾ ಸಾಹಿತ್ಯ ಬರೆದಿರುವ ಹಾಡಿಗೆ ಸಿದ್‌ಶ್ರೀರಾಮ್ ಧ್ವನಿಯಾಗಿದ್ದಾರೆ. ಡಿ ಇಮ್ಮನ್ ಸಂಗೀತ ಒದಗಿಸಿದ್ದಾರೆ. ಕರ್ನಾಟಕ-ತಮಿಳುನಾಡು ನಡುವಿನ ಗಡಿಭಾಗದ ಪ್ರೇಮಕಥೆಯಾಗಿರುವ ಏಳುಮಲೆ ಸಿನಿಮಾದಲ್ಲಿ ನಟಿ ರಕ್ಷಿತಾ ಸೋದರ ರಾಣಾ ಕನ್ನಡದ ಹುಡ್ಗ ಹರೀಶನಾಗಿ ನಟಿಸುತ್ತಿದ್ದಾರೆ. ರಿಯಾಲಿಟಿ ಶೋ ಮೂಲಕ ಮನೆಮಾತಾಗಿರುವ ಮೈಸೂರಿನ ಹುಡುಗಿ ಪ್ರಿಯಾ ಆಚಾರ್ ತಮಿಳು ಹುಡುಗಿಯ ಪಾತ್ರದಲ್ಲಿ ನಟಿಸುತ್ತಿದ್ದಾರೆ.











Edited, Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ N R K Media World, No-10, 'A' 1st floor, 4th cross, 4th main, Gandhinagar Bengaluru-560009. email: karavalitharangini@gmail.com PH: +91 9880109212